ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಬೀದರ್ ಜಿಲ್ಲೆಯ ಕಾಡು ಪ್ರಾಣಿಗಳ ಹಾವಳಿ ಕುರಿತು

ಶ್ರೀ ರಘುನಾಥ್‌ರಾವ್‌ಮಲ್ಕಾಪೂರೆ(ವಿಧಾನಸಭೆಯಿಂದಚುನಾಯಿತರಾದವರು):-

1496 (1733) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಕಾಡು ಪ್ರಾಣಿಗಳ ಹಾವಳಿಯಿಂದಾದ ಬೆಳೆ ನಷ್ಟಕ್ಕೆ ಪರಿಹಾರ ಕೋರಿ ಅರ್ಜಿ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; (ಅರ್ಜಿದಾರರ ಹೆಸರು ಗ್ರಾಮದ ವಿಳಾಸ ನೀಡುವುದು)

(ಆ) ಅವುಗಳಲ್ಲಿ ಪರಿಹಾರ ನೀಡದೆ ತಿರಸ್ಕೃತವಾದ ಮತ್ತು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ನೀಡಲಾದ ಪರಿಹಾರ ಮೊತ್ತವೆಷ್ಟು; ಅರ್ಜಿಗಳನ್ನು ಇತ್ಯರ್ಥ ಪಡಿಸಲು ಇಲಾಖೆಯ ಕ್ರಮವೇನು ; (ವರ್ಷವಾರು, ತಾಲ್ಲೂಕುವಾರು, ವಿಧಾನಸಭಾ ಕ್ಷೇತ್ರವಾರು, ಗ್ರಾಮವಾರು ವಿವರ ನೀಡುವುದು)

(ಇ) ಕಾಡು ಪ್ರಾಣಿಗಳಿಂದ ರೈತರ ಬೆಳೆ ಹಾನಿಯ ನಷ್ಟಕ್ಕೆ ಪರಿಹಾರ ನೀಡಲು ಇಲಾಖೆಯಿಂದ ಹೊರಡಿಸಲಾದ ಮಾರ್ಗದರ್ಶಿ ಆದೇಶ ಯಾವುವು ; ಮಂಗಳ ಹಾವಳಿಯಿಂದ ಉಂಟಾದ ಬೆಳೆ ಹಾನಿಗೆ ಇಲಾಖೆಯಿಂದ ಪರಿಹಾರ ನೀಡಲು ಅನುಸರಿಸುವ ಮಾರ್ಗಸೂಚಿ ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)